## ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1383 (1489) |
| ಮಾನ್ಯ ಸದಸ್ಯರ ಹೆಸರು | : | ಶ್ರೀ ಪಿ. ಹೆಚ್. ಪೂಜಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 17.03.2026 |
| ಉತ್ತರಿಸುವ ಸಚಿವರು | : | ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಕಳೆದ ಮೂರು ವರ್ಷಗಳಲ್ಲಿ ಕರ್ನಾಟಕ ಕೈಗಾರಿಕಾ ಪ್ರದೇಶ ಅಭಿವೃದ್ಧಿ ಮಂಡಳಿ ವತಿಯಿಂದ ಬಾಗಲಕೋಟೆ ಜಿಲ್ಲೆಯಲ್ಲಿ ನಿರ್ಮಾಣಗೊಂಡ ಕೈಗಾರಿಕಾ ಪ್ರದೇಶಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ಮಾಹಿತಿ ನೀಡುವುದು); ಅವುಗಳಲ್ಲಿ ಹಂಚಿಕೆಯಾದವುಗಳೆಷ್ಟು; ಇನ್ನೂ ಬಾಕಿ ಉಳಿದವುಗಳೆಷ್ಟು; (ಮಾಹಿತಿ ನೀಡುವುದು) | ಕಳೆದ ಮೂರು ವರ್ಷಗಳಲ್ಲಿ ಕರ್ನಾಟಕ ಕೈಗಾರಿಕಾ ಪ್ರದೇಶ ಅಭಿವೃದ್ಧಿ ಮಂಡಳಿ ವತಿಯಿಂದ ಬಾಗಲಕೋಟೆ ಜಿಲ್ಲೆಯಲ್ಲಿ ಯಾವುದೇ ಕೈಗಾರಿಕಾ ಪ್ರದೇಶಗಳನ್ನು ನಿರ್ಮಾಣ ಮಾಡುವ ಕಾರ್ಯವನ್ನು ಕೈಗೆತ್ತಿಕೊಂಡಿರುವುದಿಲ್ಲ. |
| ಆ) | ಸದರಿ ಕೈಗಾರಿಕಾ ಪ್ರದೇಶಗಳಲ್ಲಿ ಸ್ಥಾಪಿತವಾಗಿರುವ ಉದ್ಯಮಗಳ ಸಂಖ್ಯೆ ಎಷ್ಟು ಮತ್ತು ಸದರಿ ಉದ್ಯಮಗಳಲ್ಲಿ ಕಾರ್ಯ ನಿರ್ವಹಿಸುವ ಸ್ಥಳೀಯ ಉದ್ಯೋಗಿಗಳ ಸಂಖ್ಯೆ ಎಷ್ಟು; (ಉದ್ಯಮಗಳ ಹೆಸರು, ತಯಾರಾಗುತ್ತಿರುವ ಉತ್ಪನ್ನಗಳ ಹೆಸರು ಮಾಹಿತಿಯನ್ನು ತಾಲ್ಲೂಕುವಾರು ನೀಡುವುದು) | ಅನ್ವಯಿಸುವುದಿಲ್ಲ. |
| ಇ) | ಮೂಲಸೌಕರ್ಯಗಳ ಕೊರತೆ ಹಿನ್ನೆಲೆಯಲ್ಲಿ ಮತ್ತು ಉದ್ದಿಮೆದಾರರನ್ನು ಆಕರ್ಷಿಸುವ ದಿಶೆಯಲ್ಲಿ ಸರ್ಕಾರದ ಇಚ್ಛಾಶಕ್ತಿಯ ಕೊರತೆಯಿಂದಾಗಿ ಹಲವು ಕೈಗಾರಿಕಾ ಪ್ರದೇಶಗಳಲ್ಲಿ ಸಮರ್ಪಕವಾಗಿ ನಿವೇಶನ/ಜಮೀನುಗಳು ಹಂಚಿಕೆಯಾಗದೆ ಉಳಿಕೆಯಾಗಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ; | ಮಂಡಳಿ ವತಿಯಿಂದ ಇಲ್ಲಿಯವರೆಗೆ ಅಭಿವೃದ್ಧಿಪಡಿಸಿರುವ ಕೈಗಾರಿಕಾ ಪ್ರದೇಶಗಳಲ್ಲಿ ಮೂಲಭೂತ ಸೌಕರ್ಯಗಳಾದ ರಸ್ತೆ, ಚರಂಡಿ, ನೀರು ಮತ್ತು ವಿದ್ಯುತ್ ಸೌಕರ್ಯಗಳನ್ನು ಒಳಗೊಂಡಂತೆ ಇನ್ನಿತರೆ ಅಗತ್ಯ ಮೂಲಭೂತ ಸೌಕರ್ಯಗಳನ್ನು ಒದಗಿಸಲಾಗುತ್ತಿದೆ. |
| ಈ) | ಬಂದಿದ್ದಲ್ಲಿ, ಸರ್ಕಾರ ಈ ಬಗ್ಗೆ ಯಾವ ಯಾವ ಕ್ರಮಗಳನ್ನು ಕೈಗೊಂಡಿದೆ? | |

**ಸಂಖ್ಯೆ: ಸಿಐ 175 ಐಎಪಿ 2026**

**(ಎಂ.ಬಿ. ಪಾಟೀಲ)**
ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ
ಮೂಲಸೌಲಭ್ಯ ಅಭಿವೃದ್ಧಿ ಸಚಿವರು.